ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 126
2. ಮಾನ್ಯ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 05.12.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಉತ್ತರ ಕರ್ನಾಟಕದ ಪ್ರಮುಖ ವಾಣಿಜ್ಯ ಬೆಳೆಯಾಗಿರುವ ಕಬ್ಬಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆ ಒದಗಿಸುವುದು ಮತ್ತು ರೈತರಿಗೆ ಸಕ್ಕರೆ ಕಾರ್ಖಾನೆಗಳಿಂದ ಬರಬೇಕಾಗಿರುವ ಬಾಕಿ ಪಾವತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ; ಹಾಗಿದ್ದಲ್ಲಿ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? | ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಮಂತ್ರಾಲಯದ ಅಧೀನದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಪತ್ರ ಸಂಖ್ಯೆ:3(1)/2022-SP-I, ದಿನಾಂಕ:06.07.2023ರಲ್ಲಿ 2023-24ನೇ ಸಾಲಿನ ಸಕ್ಕರೆ ಹಂಗಾಮಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (Fair And Remunerative Price) ನಿಗದಿಗೊಳಿಸಲಾಗಿದ್ದು ವಿವರಗಳು ಈ ಕೆಳಕಂಡಂತೆ ಇರುತ್ತವೆ.<br>1.ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ - ರೂ.315.00<br>2.ಶೇಕಡ 10.25ಕ್ಕೆ ಇಳುವರಿಗೆ ಮೇಲ್ಪಟ್ಟ ತದನಂತರದ ಪ್ರತಿ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ – ರೂ.3.07<br>3.10.25% ಕ್ಕಿಂತ ಕಡಿಮೆ ಆದರೆ 9.5% ಕ್ಕಿಂತ ಮೇಲ್ಪಟ್ಟು ಇಳುವರಿಯನ್ನು ಹೊಂದಿರುವ ಕಾರ್ಖಾನೆಗಳಿಗೆ ಸಂಬಂಧಿಸಿದಂತೆ, ಪ್ರತಿ 0.1 ಶೇಕಡಾ ಇಳುವರಿ ಕಡಿಮೆಗೆ ನ್ಯಾಯ ಮತ್ತು ಲಾಭದಾಯಕ ಬೆಲೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.3.07 ರಷ್ಟು ಪ್ರಮಾಣದಲ್ಲಿ ಕಡಿತವನ್ನು ಮಾಡುವುದು.<br>4.ಶೇಕಡ.9.5 ರಷ್ಟು ಅಥವಾ ಶೇಕಡ 9.5ಕ್ಕಿಂತ ಕಡಿಮೆ ಇಳುವರಿಯನ್ನು ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.291.975 ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ನಿಗದಿಪಡಿಸುವುದು.<br><br>2022-23ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪಡೆದ ಸಕ್ಕರೆ ಇಳುವರಿಯನ್ನು ಆಧರಿಸಿ, ಮೇಲ್ಕಂಡ ಮಾರ್ಗಸೂಚಿಗಳನ್ವಯ ರಾಜ್ಯದ ಸಕ್ಕರೆ ಕಾರ್ಖಾನೆಗಳು 2023-24ನೇ ಸಕ್ಕರೆ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ನಿಗದಿಪಡಿಸಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಆದೇಶ ಹೊರಡಿಸಲು ಕ್ರಮವಹಿಸಲಾಗುತ್ತಿದೆ.<br><br>2022-23ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿ 603.55ಲಕ್ಷ ಮೆಟನ್ ಕಬ್ಬನ್ನು ನುರಿಸಲಾಗಿರುತ್ತದೆ. ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆಯ ದರದಂತೆ ರೂ.19,747.85 ಲಕ್ಷಗಳನ್ನು ಪಾವತಿಸಬೇಕಾಗಿದ್ದು, ಈ ಮೊತ್ತವನ್ನು ಪೂರ್ಣವಾಗಿ ಪಾವತಿಸಲಾಗಿರುತ್ತದೆ. ಮುಂದುವರಿದು, ಕೆಲವೊಂದು ಸಕ್ಕರೆ ಕಾರ್ಖಾನೆಗಳಲ್ಲಿ ನ್ಯಾಯ ಮತ್ತು ಲಾಭದಾಯಕ ಬೆಲೆಯ ದರಕ್ಕೂ ಮೇಲ್ಪಟ್ಟು ಕಬ್ಬು ಬಿಲ್ಲನ್ನು |

ಪಾವತಿಸಲಾಗಿರುತ್ತದೆ. ಇದರಿಂದಾಗಿ, ರಾಜ್ಯದ ಸಕ್ಕರೆ ಕಾರ್ಖಾನೆಗಳು 2022-23ನೇ ಹಂಗಾಮಿನಲ್ಲಿ ಪಾವತಿಸಿದ ಒಟ್ಟಾರೆ ಕಬ್ಬು ಬಿಲ್ಲಿನ ಪ್ರಮಾಣ ರೂ.20,138.93 ಲಕ್ಷಗಳು ಆಗಿರುತ್ತದೆ. ಈ ಹಿನ್ನೆಲೆಯಲ್ಲಿ 2022-23ನೇ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಯಾವುದೇ ಕಬ್ಬು ಬಿಲ್ಲು ಬಾಕಿ ಇರುವುದಿಲ್ಲ.

ಆದರೆ, 2018-19ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಈ ಕೆಳಕಂಡ ಮೂರು ಸಕ್ಕರೆ ಕಾರ್ಖಾನೆಗಳು ಕಬ್ಬು ಬಿಲ್ಲು ಬಾಕಿಯನ್ನು ಉಳಿಸಿಕೊಂಡಿದ್ದು, ವಿವರ ಕೆಳಗಿನಂತೆ ಇರುತ್ತದೆ.

| ವರ್ಷ | ಕಾರ್ಖಾನೆಯ ಹೆಸರು | ಬಾಕಿ ಇರುವ ಮೊತ್ತ (ರೂ.ಕೋಟಿಗಳಲಿ) |
|---|---|---|
| 2018-19 | 1. ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ | 0.89 |
| | 2. ಭವಾನಿ ಶುಗರ್ ಲಿ.,ಬರೂರ, ಬೀದರ್ ಜಿಲ್ಲೆ | 1.80 |
| | 3. ಧ್ಯಾನಯೋಗಿ ಶ್ರೀ ಶಿವಕುಮಾರ ಸ್ವಾಮಿಜಿ ಶುಗರ್ ಲಿ., ಇಂಡಿ ವಿಜಯಪುರ ಜಿಲ್ಲೆ | 1.25 |
| ಒಟ್ಟು | | 3.94 |

2018-19ನೇ ಸಾಲಿನಲ್ಲಿ ಬಾಕಿ ಉಳಿಸಿಕೊಂಡಿರುವ ಮೂರು ಸಕ್ಕರೆ ಕಾರ್ಖಾನೆಗಳ ವಿರುದ್ಧ ವಸೂಲಾತಿ ಪ್ರಮಾಣ ಪತ್ರವನ್ನು ಹೊರಡಿಸಿ ಕ್ರಮಕೈಗೊಳ್ಳುವಂತೆ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿರುತ್ತದೆ.

ಈ ಮೂರು ಸಕ್ಕರೆ ಕಾರ್ಖಾನೆಗಳು ಕಳೆದ ನಾಲ್ಕು ಹಂಗಾಮುಗಳಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ಕಾರ್ಖಾನೆಗಳಿಗೆ ಯಾವುದೇ ಆದಾಯದ ಮೂಲಗಳು ಇರುವುದಿಲ್ಲ. ಆದ್ದರಿಂದ ಕಬ್ಬು ಬಿಲ್ಲು ವಸೂಲು ಮಾಡುವಲ್ಲಿ ವಿಳಂಬವಾಗಿರುತ್ತದೆ.

ಆದ್ದರಿಂದ, ಈ ಮೂರು ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಕಾರ್ಖಾನೆಗಳ ಚರ ಮತ್ತು ಸ್ಥಿರಾಸ್ತಿಗಳನ್ನು ಹರಾಜು ಪ್ರಕ್ರಿಯೆಗೆ ಒಳಪಡಿಸಿ ಬಾಕಿ ಕಬ್ಬು ಬಿಲ್ಲು ವಸೂಲಾತಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದ್ದು, ವಸೂಲಾತಿ ಪ್ರಕ್ರಿಯ ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: ಸಿಐ 266 ಎಸ್‌ಜಿಎಫ್ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು